ಶ್ರೀ ರೇವುನಾಯಕ್ ಬೆಳಮಗಿ (ಪಶುಸಂಗೋಪನಾ ಸಚಿವರು) :

ಅ) ಹೌದು

ಆ) ಪ್ರಸ್ತಾವನೆ ಪರಿಶೀಲನೆಯಲ್ಲಿದೆ.

611 ಶ್ರೀ ಪುಟ್ಟರಾಜು. ಸಿ.ಎಸ್. (ಮೇಲುಕೋಟೆ) : ಮಾನ್ಯ ಪಶುಸಂಗೋಪನಾ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮಂಡ್ಯ ಜಿಲ್ಲೆಯ ಮೇಲುಕೋಟೆ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಪಶುವೈದ್ಯಕೀಯ ಆಸ್ಪತ್ರೆಗಳೆಷ್ಟು;

ಆ) ಸದರಿ ಆಸ್ಪತ್ರೆಗಳನ್ನು ಮೇಲ್ದರ್ಜೆಗೇರಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ? ಹಾಗಿದ್ದಲ್ಲಿ, ಮೇಲ್ದರ್ಜೆಗೇರಿಸುವ ಆಸ್ಪತ್ರೆಗಳ ಸಂಖ್ಯೆ ಎಷ್ಟು ಹಾಗೂ ಮೀಸಲಿಟ್ಟಿರುವ ಹಣ ಎಷ್ಟು;

ಇ) ಪ್ರಸ್ತುತ ವರ್ಷದಲ್ಲಿ ಬಿಡುಗಡೆ ಮಾಡಿರುವ ಹಣವೆಷ್ಟು;

ಶ್ರೀ ರೇವುನಾಯಕ್ ಬೆಳಮಗಿ (ಪಶುಸಂಗೋಪನಾ ಸಚಿವರು) :

ಅ) 23

ಆ) ಮೂಲಭೂತ ಸೌಲಭ್ಯ, ಸಿಬ್ಬಂದಿ ಹಾಗೂ ಪದವೀಧರ ಪಶುವೈದ್ಯರ ಕೊರತೆ ಇರುವುದರಿಂದ ಸದ್ಯಕ್ಕೆ ಪಶುವೈದ್ಯಕೀಯ ಸಂಸ್ಥೆಗಳನ್ನು ಮೇಲ್ದರ್ಜೆಗೇರಿಸುವ ಪ್ರಕ್ರಿಯೆಯನ್ನು ಮುಂದೂಡಲಾಗಿದೆ. ಅದಕ್ಕಾಗಿ ಯಾವುದೇ ಹಣ ಮೀಸಲಿರಿಸಿರುವುದಿಲ್ಲ.

ಇ) ಉದ್ಭವಿಸುವುದಿಲ್ಲ.

622 ಶ್ರೀ ಶ್ರೀನಿವಾಸ್ (ವಾಸು) ಎಸ್.ಆರ್. (ಗುಬ್ಬಿ) : ಮಾನ್ಯ ಇಂಧನ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ತುಮಕೂರು ಜಿಲ್ಲೆಯ ಗುಬ್ಬಿ ತಾಲ್ಲೂಕಿನ ವ್ಯಾಪ್ತಿಯಲ್ಲಿ ಬರುವ ಜಿ. ಹೊಸಹಳ್ಳಿ ಬಳಿ ಹೊಸ ವಿದ್ಯುತ್ ಸ್ಥಾವರ ಪ್ರಾರಂಭಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಆ) ಹಾಗಿದ್ದಲ್ಲಿ, ಎಂದಿನಿಂದ ಪ್ರಾರಂಭಿಸಲಾಗುವುದು?